**C.C.No. 212/2020**
**P.W.1**

ದಿನಾಂಕಃ17.07.2023 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀಸವಾಲುಃ ಶ್ರೀ ಹೆಚ್.ಎನ್.ಎಸ್. ಆರೋಪಿ ಪರ ವಕೀಲರಿಂದಃ

3 ನೇ ಆರೋಪಿ ಸಿದ್ದರಾಮಪ್ಪ ನನ್ನ ಮಾವ. ನಾನು 3 ನೇ ಆರೋಪಿಯ ಅಣ್ಣನ ಮಗಳು ಎಂದರೆ ಸರಿಯಲ್ಲ. 1 ನೇ ಆರೋಪಿಯು 2 ನೇ ಆರೋಪಿಯ ಅಕ್ಕನ ಮಗ ಎಂದರೆ ಸರಿ. 1 ನೇ ಆರೋಪಿ ಅಜ್ಜಂಪುರ ಗ್ರಾಮದ ವಾಸಿ ಎಂದರೆ ಸರಿ. 1 ನೇ ಆರೋಪಿ ಹೊಳಲಕೆರೆ ತಾಲ್ಲೂಕಿನ ಎಂಬಿಗನಹಳ್ಳಿ ಗ್ರಾಮದ ಅನುಷಾರವರನ್ನು ಮದುವೆಯಾಗಿದ್ದರು ಎಂದರೆ ಸರಿ. ನಾನು ಹೊಸದುರ್ಗ ರಸ್ತೆ ಚಿಗರಹಟ್ಟಿ ಗ್ರಾಮದ ಪ್ರಹ್ಲಾದ್ ರವರನ್ನು ಮದುವೆಯಾಗಿರುತ್ತೇನೆ ಎಂದರೆ ಸರಿಯಲ್ಲ. ನಾನು 1 ನೇ ಆರೋಪಿಯನ್ನು ಮದುವೆಯಾಗಿರುವುದಿಲ್ಲ ಎಂದರೆ ಸರಿಯಲ್ಲ. 1 ನೇ ಆರೋಪಿಯು ಪೊಲೀಸರ ಸಮಕ್ಷಮ ನನಗೆ ಅರಿಸಿನ ಕಟ್ಟಿರುತ್ತಾನೆ. ನಾನು 1 ನೇ ಆರೋಪಿಯನ್ನು ಮದುವೆಯಾಗುವಂತೆ ಒತ್ತಾಯ ಮಾಡಿರುತ್ತೇನೆ ಎಂದರೆ ಸರಿಯಲ್ಲ.

ನಿಪಿ.1 ದೂರಿನಲ್ಲಿ ಏನು ಬರೆಯಲಾಗಿದೆ ಎಂದು ನನಗೆ ಗೊತ್ತಿಲ್ಲ. ನಿಪಿ.1 ನ್ನು ಪೊಲೀಸರು ಬರೆದಿರುತ್ತಾರೆ. ದಿಃ 05.08.2019 ರಂದು ನೀಡಿರುವ ದೂರಿನ ಪ್ರತಿಯನ್ನು ಹಾಜರು ಪಡಿಸಿಲ್ಲ ಎಂದರೆ ಸರಿ. ನಾನು ಆರೋಪಿತರ ವಿರುದ್ಧ ಸುಳ್ಳು ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ. ದಿಃ 06.08.2019 ರಂದು ಆರೋಪಿತರ ಮತ್ತು ನನ್ನ ನಡುವೆ ಯಾವುದೇ ಗಲಾಟೆಯಾಗಿಲ್ಲ ಎಂದರೆ ಸರಿಯಲ್ಲ. ಆರೋಪಿತರು ಅವಾಚ್ಯ ಶಬ್ಧಗಳಿಂದ ಬೈದು ದೊಣ್ಣೆ ಮತ್ತು ಕೈಗಳಿಂದ ಹಲ್ಲೆ ಮಾಡಿ ಪ್ರಾಣ ಬೆದರಿಕೆ ಹಾಕಿರುವುದಿಲ್ಲ ಎಂದರೆ ಸರಿಯಲ್ಲ. ಮು.ಮಾ.1 ದೊಣ್ಣೆಯನ್ನು ನಾನು ನ್ಯಾಯಾಲಯದ ಮುಂದೆ ಮೊದಲ ಬಾರಿಗೆ ನೋಡುತ್ತಿದ್ದೇನೆ ಎಂದರೆ ಸರಿಯಲ್ಲ. ಮು.ಮಾ.1 ದೊಣ್ಣೆಯಿಂದ ಆರೋಪಿತರು ಹಲ್ಲೆ ಮಾಡಿಲ್ಲ ಎಂದರೆ ಸರಿಯಲ್ಲ.

ಆರೋಪಿತರು ನನ್ನ ಮೇಲೆ ಹಲ್ಲೆ ಮಾಡಿದ ಬಗ್ಗೆ ನಾನು ವೈದ್ಯಾಧಿಕಾರಿಗಳ ಮುಂದೆ ಹೇಳಿಲ್ಲ ಎಂದರೆ ಸರಿಯಲ್ಲ. ನಿಪಿ.2 ಪಂಚನಾಮೆಯಲ್ಲಿ ಬರೆದಿರುವ ವಿಷಯಗಳು ನನಗೆ ಗೊತ್ತಿರುತ್ತವೆ. ನಿಪಿ.2 ಪಂಚನಾಮೆಗೆ ನಾನು ಪೊಲೀಸ್ ಠಾಣೆಯಲ್ಲಿ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಚಾಸಾ.2 ಮತ್ತು 3 ರವರು ನಿಪಿ.2 ಪಂಚನಾಮೆಗೆ ಠಾಣೆಯಲ್ಲಿ ಸಹಿ ಮಾಡಿರುತ್ತಾರೆ ಎಂದರೆ ಸರಿ. ಆರೋಪಿತರಿಗೆ

**ತೊಂದರೆ ಕೊಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.**

**ಮರು ವಿಚಾರಣೆ : ಇಲ್ಲ**

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)**

ಓ ಹೇ ಕೇ ಸ ಇ ಎ ಒ

sd/-
1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ:ದ:ನ್ಯಾ:ದಂ.,ರವರು, ಕಡೂರು.